ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ
**Karnataka State Rural Development and Panchayat Raj University**

ರೈತ ಭವನ, ಜನರಲ್‌ಕಾರ್ಯಪ್ಪ ವೃತ್ತ, ಗದಗ– 582 101
**RaithaBhavana, General Cariappa Circle, Gadag – 582 101**
**E-mail: ksrdpruadmissions@gmail.com Phone: 08372-230338, Fax: 08372-297343**

# News about Fees Concession for orphan students by KSRDPR university published in Kannada Daily News Paper

ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ಘೋಷಣೆ

## ಪಾಲಕರನ್ನು ಕಳೆದುಕೊಂಡ ಮಕ್ಕಳಿಗೆ ಶುಲ್ಕ ವಿನಾಯಿತಿ

• ಕನ್ನಡಪ್ರಭ ವಾರ್ತೆ ಗದಗ

ಮಹಾಮಾರಿ ಕೊರೋನಾದಿಂದ ತಂದೆ-ತಾಯಿ ಇಬ್ಬರನ್ನೂ ಕಳೆದುಕೊಂಡ ವಿದ್ಯಾರ್ಥಿಗಳಿಗೆ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದಲ್ಲಿ ಪ್ರವೇಶ ಹಾಗೂ ವಸತಿ ಶುಲ್ಕದಲ್ಲಿ ವಿನಾಯಿತಿ, ಓರ್ವ ಪಾಲಕರನ್ನು ಕಳೆದುಕೊಂಡ ವಿದ್ಯಾರ್ಥಿಗಳಿಗೆ ಶುಲ್ಕದಿಂದ ವಿನಾಯಿತಿ ಒದಗಿಸಲಾಗುವುದು ಎಂದು ವಿವಿಯ ಕುಲಪತಿ ಪ್ರೊ. ವಿಷ್ಣುಕಾಂತ ಚಟಪಲ್ಲಿ ಹೇಳಿದರು.

ಅವರು ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೊರೋನಾದಿಂದ ಅನೇಕರು ತೊಂದರೆಗೆ ಸಿಲುಕಿದ್ದಾರೆ. ಅದರಲ್ಲೂ ಕೆಲ ವಿದ್ಯಾರ್ಥಿಗಳು ಪಾಲಕರನ್ನು ಕಳೆದುಕೊಂಡು ಅನಾಥರಾಗಿದ್ದಾರೆ. ಅಂತಹ ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲವಾಗುವ ದೃಷ್ಟಿಯಿಂದ ವಿವಿಯಲ್ಲಿ ಪ್ರವೇಶ ಪಡೆಯಲಿಚ್ಛಿಸುವ ಅಂತಹ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ವಿನಾಯಿತಿ ಘೋಷಿಸಿದೆ.

ಗ್ರಾಮೀಣಾಭಿವೃದ್ಧಿ ಹಾಗೂ ಸಂಶೋಧನೆಯ ಉದ್ದೇಶದಿಂದ ಹುಟ್ಟಿಕೊಂಡಿರುವ ಗ್ರಾಮೀಣಾಭಿವೃದ್ಧಿ ವಿವಿಯಿಂದ ಕೊರೋನಾದಿಂದಾಗಿ ಘೋಷಣೆಯಾಗಿದ್ದ ಲಾಕ್‌ಡೌನ್ ಸಂದರ್ಭದಲ್ಲಿ ಹಲವು ಸಮಾಜಪರ ಕಾರ್ಯಗಳನ್ನು ಕೈಗೊಂಡಿದೆ. ಸಾರ್ವಜನಿಕರಿಗೆ ಆಹಾರ ದಾನ, ಜಾನುವಾರುಗಳಿಗೆ ಮೇವುದಾನದಂತ ಕಾರ್ಯ ಕೈಗೊಂಡಿದೆ. ರಕ್ತ, ಪ್ಲಾಸ್ಮಾದಾನದಂತಹ ಅನೇಕ ಉತ್ತಮ ಕಾರ್ಯಗಳನ್ನು ಮಾಡಿದೆ. ಜತೆಗೆ ವಿವಿಧ ಸಂಘಟನೆ ಸಹಯೋಗದಲ್ಲಿ 20 ಸರ್ಕಾರಿ ಶಾಲೆಗಳನ್ನು ದತ್ತು ಪಡೆದುಕೊಂಡಿದ್ದು, ಅವುಗಳ ಅಭಿವೃದ್ಧಿಗೆ ಕಾರ್ಯ ನಿರ್ವಹಿಸುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ವಿವಿಯ ಪ್ರಾಧ್ಯಾಪಕರು, ಸಿಬ್ಬಂದಿ ಇದ್ದರು.

### ನಾಳೆಯಿಂದ ತರಗತಿ ಆರಂಭ

ಗ್ರಾಮೀಣಾಭಿವೃದ್ಧಿ ವಿವಿಯಲ್ಲಿ ಜು. 28 ರಿಂದ ಭೌತಿಕ ತರಗತಿಗಳು ಆರಂಭವಾಗುತ್ತವೆ. ಈಗಾಗಲೇ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳನ್ನು ಪ್ರೊಮೋಟ್ ಮಾಡಲಾಗಿದ್ದು, ಮೂರನೇ ಸೆಮಿಸ್ಟರ್ ಪರೀಕ್ಷೆಯನ್ನು ಫೆಬ್ರುವರಿ/ ಮಾರ್ಚ್‌ನಲ್ಲಿ ನಡೆಸಲಾಗಿದೆ. ಇನ್ನು 2 ಹಾಗೂ 4ನೇ ಸೆಮಿಸ್ಟರ್ ಪರೀಕ್ಷೆಗಳನ್ನು ಸೆಪ್ಟೆಂಬರ್ ಮೂರನೇ ವಾರದಲ್ಲಿ ನಡೆಸಲು ತೀರ್ಮಾನಿಸಿದ್ದು, ಅಕ್ಟೋಬರ್ 1 ರಿಂದ 2021-22 ನೇ ಸಾಲಿನ ಶೈಕ್ಷಣಿಕ ವರ್ಷದ ಕೋರ್ಸ್‌ಗಳು ಆರಂಭವಾಗಲಿವೆ. ವಿವಿಯಲ್ಲಿ ಇಲ್ಲಿಯವರೆಗೆ ಸ್ನಾತಕೋತ್ತರ ಪದವಿಗಳನ್ನು ಮಾತ್ರ ನಡೆಸಲಾಗುತ್ತಿದ್ದು, 2021-22 ನೇ ಸಾಲಿನಿಂದ ನೂತನ ಶಿಕ್ಷಣ ನೀತಿ ಹಾಗೂ ಯುಜಿಸಿ ನಿಯಮಾವಳಿಯಂತೆ ಸ್ನಾತಕೋತ್ತರ ಪದವಿಗಳನ್ನೂ ಆರಂಭಿಸಲಾಗುವುದು. ಇವು ಕನ್ನಡ ಹಾಗೂ ಆಂಗ್ಲ ಮಾಧ್ಯಮಗಳೆರಡರಲ್ಲೂ ಲಭ್ಯವಿರುತ್ತವೆ ಎಂದು ವಿವಿ ಕುಲಪತಿ ವಿಷ್ಣುಕಾಂತ ಹೇಳಿದರು.



ಸುದ್ದಿಗೋಷ್ಠಿಯಲ್ಲಿ ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ವಿಷ್ಣುಕಾಂತ ಚಟಪಲ್ಲಿ ಮಾತನಾಡಿದರು.